# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1197 |
| 2. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : | 21.08.2025 |
| 4. | ಉತ್ತರಿಸುವ ಸಚಿವರು | : | ಗೃಹ ಸಚಿವರು. |

<table>
<tr><th>ಕ್ರಮ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ದಕ್ಷಿಣ ಕನ್ನಡ ಉಡುಪಿ ಜಿಲ್ಲೆ ಮತ್ತು ರಾಜ್ಯದಾದ್ಯಂತ ಮಾದಕ ವಸ್ತು ಸೇವನೆ ಮಾರಾಟ ಮತ್ತು ಸಾಗಾಣಿಕೆಗೆ ಸಂಬಂಧಿಸಿದಂತೆ 2023-24 ಮತ್ತು 2024-25ನೇ ಸಾಲಿನಲ್ಲಿ ನಡೆದ ಅಪರಾಧ ಪ್ರಕರಣಗಳು, ದಾಖಲಾದ ಪ್ರಕರಣಗಳು ಮತ್ತು ಪತ್ತೆಯಾದ ಪ್ರಕರಣಗಳು ಎಷ್ಟು ಮತ್ತು ಅವುಗಳ ಮೌಲ್ಯವೆಷ್ಟು; (ಜಿಲ್ಲಾವಾರು ವಿವರ ನೀಡುವುದು)</td><td>ದಕ್ಷಿಣ ಕನ್ನಡ, ಮಂಗಳೂರು ನಗರ, ಉಡುಪಿ ಜಿಲ್ಲೆ ಮತ್ತು ರಾಜ್ಯಾದ್ಯಂತ ಮಾದಕ ವಸ್ತು ಸೇವನೆ ಮಾರಾಟ ಮತ್ತು ಸಾಗಾಣಿಕೆಗೆ ಸಂಬಂಧಿಸಿದಂತೆ 2023, 2024 ಮತ್ತು 2025ನೇ ಸಾಲಿನಲ್ಲಿ ವರದಿಯಾಗಿರುವ ಪ್ರಕರಣಗಳು, ಪತ್ತೆಯಾದ ಪ್ರಕರಣಗಳು ಮತ್ತು ಅವುಗಳ ಮೌಲ್ಯದ ವಿವರಗಳು ಈ ಕೆಳಕಂಡಂತಿದೆ:-
<table>
<tr><th>ವರ್ಷ</th><th colspan="2">2023</th><th colspan="2">2024</th><th colspan="2">2025(ಜುಲೈ)</th></tr>
<tr><th></th><th>ವರದಿ</th><th>ಪತ್ತೆ</th><th>ವರದಿ</th><th>ಪತ್ತೆ</th><th>ವರದಿ</th><th>ಪತ್ತೆ</th></tr>
<tr><td>ದಕ್ಷಿಣಕನ್ನಡ</td><td>66</td><td>66</td><td>44</td><td>44</td><td>10</td><td>10</td></tr>
<tr><td>ಮಂಗಳೂರು ನಗರ</td><td>713</td><td>713</td><td>1114</td><td>1114</td><td>406</td><td>406</td></tr>
<tr><td>ಉಡುಪಿ</td><td>272</td><td>272</td><td>123</td><td>123</td><td>91</td><td>91</td></tr>
<tr><td>ರಾಜ್ಯಾದ್ಯಂತ</td><td>6767</td><td>6767</td><td>4188</td><td>4188</td><td>3530</td><td>3530</td></tr>
</table>
<u>ವಶಪಡಿಸಿಕೊಂಡ ಮಾದಕ ವಸ್ತುಗಳ ಅಂದಾಜು ಮೌಲ್ಯ:-</u>
<table>
<tr><th>ಘಟಕ</th><th>2023</th><th>2024</th><th>2025 (ಜುಲೈ)</th></tr>
<tr><td>ದಕ್ಷಿಣಕನ್ನಡ</td><td>7,26,260</td><td>1,02,720</td><td>82,000</td></tr>
<tr><td>ಮಂಗಳೂರು ನಗರ</td><td>1,71,11,700</td><td>82,51,99,930</td><td>1,39,43,150</td></tr>
<tr><td>ಉಡುಪಿ</td><td>11,20,300</td><td>25,38,610</td><td>13,62,520</td></tr>
<tr><td>ರಾಜ್ಯಾದ್ಯಂತ</td><td>133,51,00,000</td><td>165,21,00,000</td><td>119,43,00,000</td></tr>
</table>
</td></tr>
<tr><td>(ಆ)</td><td>ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿಸಲಾದ ವಿದೇಶಿ ಪ್ರಜೆಗಳ ಸಂಖ್ಯೆ ಎಷ್ಟು; 15-29 ವಯೋಮಾನದ ಯುವಕರು ಎಷ್ಟು; ಯಾವ ವಿಧವಾದ ಮಾದಕ ವಸ್ತುಗಳನ್ನು ಪತ್ತೆಹಚ್ಚಲಾಗಿದೆ; ಅವುಗಳ ಮೂಲ ಯಾವುದು; (ವಿವರ ಒದಗಿಸುವುದು)</td><td>ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾದಕ ವಸ್ತು ಸೇವನೆ ಮಾರಾಟ ಮತ್ತು ಸಾಗಾಣಿಕೆಗೆ ಸಂಬಂಧಿಸಿದಂತೆ 2023 ನೇ ಸಾಲಿನಿಂದ ಇಲ್ಲಿಯವರೆಗೆ ಯಾವುದೇ ಅಪರಾಧ ಪ್ರಕರಣಗಳಲ್ಲಿ ವಿದೇಶಿ ಪ್ರಜೆಗಳನ್ನು ಬಂಧಿಸಿರುವುದಿಲ್ಲ.<br><br>ಮಂಗಳೂರು ನಗರದಲ್ಲಿ 2023ನೇ ಸಾಲಿನಿಂದ 2025 (ಜುಲೈ)ವರೆಗೆ 12 ಜನ ವಿದೇಶಿ ಪ್ರಜೆಗಳನ್ನು ಬಂಧಿಸಲಾಗಿದೆ. ಬಂಧಿತ ವಿದೇಶಿ ಪ್ರಜೆಗಳ ವಯೋಮಾನದ ವಿವರಗಳು ಈ ಕೆಳಕಂಡಂತಿದೆ:-<br>➢ 23 ರಿಂದ 28 ವರಗೆ -5 ಜನ<br>➢ 30 ರಿಂದ 44 ವರಗೆ - 7 ಜನ<br><br>ಗಾಂಜಾ, ಎಂ.ಡಿ.ಎಂ, ಕೊಕೇನ್, ಮೇಥಫೆಟಮಿನ್, ಮಥಕಲೋನ್, ಹೈಡ್ರೋವಿಡ್ ಗಾಂಜಾ, ಚರಾಸ್, ಬಾಂಗ್ ಚಾಕೊಲೇಟ್, ಎಲ್.ಎಸ್.ಡಿ ಸ್ಟ್ಯಾಂಪ್ಸ್, ಹ್ಯಾಶಿಸ್ ಆಯಿಲ್ ಮುಂತಾದ ವಿವಿಧ ಬಗೆಯ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.</td></tr>
</table>

| | | |
|---|---|---|
| (ಇ) | ಮಾದಕ ವಸ್ತುಗಳ ಸೇವನೆ ಮತ್ತು ಸಾಗಾಣಿಕೆ ಹಾಗೂ ಮಾರಾಟವನ್ನು ನಿರ್ಬಂಧಿಸಲು ಪ್ರಸ್ತುತ ಇರುವ ನಿಯಮಗಳು ಯಾವುದು; ಪ್ರಕರಣ ಸಾಬೀತಾದಲ್ಲಿ ಇರುವ ಶಿಕ್ಷೆಗಳೇನು; | ಮಾದಕ ವಸ್ತುಗಳ ಸೇವನೆ, ಮಾರಾಟ ಹಾಗೂ ಸಾಗಾಣಿಕೆಗೆ ಸಂಬಂಧಿಸಿದಂತೆ, ಎನ್.ಡಿ.ಪಿ.ಎಸ್ ಕಾಯ್ದೆ-1985ರ ಅಧ್ಯಾಯ 4 ರಲ್ಲಿ ಶಿಕ್ಷೆ ಮತ್ತು ದಂಡನೆಗಳ ಬಗ್ಗೆ ವಿವರಿಸಲಾಗಿದೆ. ಮಾದಕ ವಸ್ತುಗಳ ಸೇವನೆ ಮಾಡಿದ ಪ್ರಕರಣಗಳಲ್ಲಿ ಕಲಂ 27(ಬಿ) ಎನ್.ಡಿ.ಪಿ.ಎಸ್ ಕಾಯ್ದೆ-1985ರಂತೆ ಪ್ರಕರಣ ದಾಖಲು ಮಾಡಲಾಗುತ್ತದೆ.<br>• ಕಲಂ 27 (a) ರಲ್ಲಿ ಮಾದಕ ವ್ಯಸನಿಗಳಿಗೆ 1 ವರ್ಷ ತಿಂಗಳ ಶಿಕ್ಷೆ ಅಥವಾ ದಂಡ ಅಥವಾ ಎರಡನ್ನು ವಿಧಿಸುವ ಅವಕಾಶವಿರುತ್ತದೆ.<br>• ಕಲಂ 27 (b) ರಲ್ಲಿ ಮಾದಕ ವ್ಯಸನಿಗಳಿಗೆ 6 ತಿಂಗಳ ಶಿಕ್ಷೆ, ಅಥವಾ ದಂಡ ಅಥವಾ ಎರಡನ್ನು ವಿಧಿಸುವ ಅವಕಾಶವಿರುತ್ತದೆ.<br>ಮಾದಕ ವಸ್ತುಗಳ ಸಾಗಾಣಿಕೆ ಹಾಗೂ ಮಾರಾಟಕ್ಕೆ ಸಂಬಂಧಿಸಿದಂತೆ ಕಲಂ 8(ಸಿ), 20(ಬಿ) ಎನ್.ಡಿ.ಪಿ.ಎಸ್. ಕಾಯ್ದೆ-1985ರ ರೀತ್ಯಾ ಪ್ರಕರಣ ದಾಖಲಿಸಲಾಗುತ್ತದೆ. |
| (ಈ) | ಮಾದಕ ವಸ್ತು ಸೇವನೆ ಅಡಿ ಬಂದಿಸಲಾದ ವ್ಯಕ್ತಿಗಳನ್ನು ವ್ಯಸನ ಮುಕ್ತಗೊಳಿಸಲು ಮತ್ತು ಯುವ ಜನತೆಯನ್ನು ಮಾದಕ ವಸ್ತು ಸೇವನೆಯಿಂದ ದೂರವಿರಲು ಸರ್ಕಾರ ಕೈಗೊಂಡ ಕ್ರಮಗಳೇನು; | ➢ ರಾಜ್ಯದಲ್ಲಿ ಮಾದಕ ಸೇವನೆಯ ವ್ಯಸನಿಗಳನ್ನು ವ್ಯಸನ ಮುಕ್ತಗೊಳಿಸಲು ಸರ್ಕಾರವು ರಾಜ್ಯಾದ್ಯಂತ 24 ಡಿ-ಅಡಿಕ್ಷನ್ ಸೆಂಟರ್ ಗಳನ್ನು ಗುರುತಿಸಿದ್ದು, ಸದರಿ ಕೇಂದ್ರಗಳಲ್ಲಿ ವ್ಯಸನಿಗಳಿಗೆ ಚಿಕಿತ್ಸೆಯನ್ನು ನೀಡಲಾಗುತ್ತಿದೆ.<br>➢ ಮಾದಕ ವಸ್ತು ಸೇವನೆ ಅಡಿ ಬಂಧಿಸಲಾದ ವ್ಯಕ್ತಿಗಳನ್ನು ವ್ಯಸನ ಮುಕ್ತಗೊಳಿಸಲು ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಮಾನ್ಯ ನ್ಯಾಯಾಲಯದ ಆದೇಶದ ಅಥವಾ ವೈದ್ಯರ/ತಜ್ಞರ ಸಲಹೆಯ ಮೇರೆಗೆ ಚಿಕಿತ್ಸೆಗಾಗಿ ಕಳುಹಿಸಿಕೊಡಲಾಗುವುದು.<br>➢ ಯುವ ಜನತೆಯನ್ನು ಮಾದಕ ವಸ್ತು ಸೇವನೆಯಿಂದ ದೂರವಿರಲು ಶಾಲಾ-ಕಾಲೇಜುಗಳಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗಿರುತ್ತದೆ.<br>➢ ವಿವಿಧ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸಾರ್ವಜನಿಕರು ಹಾಗೂ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳೊಂದಿಗೆ "I Run for Drug Free Karnataka" ಎಂಬ ಘೋಷವಾಕ್ಯದೊಂದಿಗೆ ಕರ್ನಾಟಕ ರಾಜ್ಯ ಪೊಲೀಸ್ ರನ್ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿರುತ್ತದೆ.<br>➢ ಜೂನ್ 26, 2025 ರಂದು "ಡ್ರಗ್ಸ್ ದುರುಪಯೋಗ ಮತ್ತು ಅಕ್ರಮ ಸಾಗಾಣಿಕೆ ವಿರುದ್ಧ ಅಂತರ ರಾಷ್ಟ್ರೀಯ ದಿನಾಚರಣೆ" ಅಂಗವಾಗಿ ಸುಮಾರು 4000 ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತರಬೇತಿ ಕಾರ್ಯಾಗಾರ ಆಯೋಜಿಸಿ ತಿಳುವಳಿಕೆ ನೀಡಲಾಗಿದೆ.<br>➢ Drugs Free Karnataka Mobile App ಅನ್ನು ಅಭಿವೃದ್ಧಿಪಡಿಸಿ ಸಾರ್ವಜನಿಕರಲ್ಲಿ ಹಾಗೂ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ, ಮಾದಕವಸ್ತು ಬಳಕೆ, ಸಂಗ್ರಹಣೆ, ಸರಬರಾಜು ಮೇಲೆ ನಿಯಂತ್ರಣ ಸಾಧಿಸುವ ನಿಟ್ಟಿನಲ್ಲಿ ದಿಟ್ಟ ಕ್ರಮಕೈಗೊಳ್ಳಲಾಗುತ್ತಿದೆ.<br>➢ NDPS ಪ್ರಕರಣಗಳಲ್ಲಿನ ಆರೋಪಿಗಳ ಮಾಹಿತಿಯನ್ನು ಪೊಲೀಸ್ ಐಟಿ ತಂತ್ರಾಂಶ- National Integrated Database on Arrested Narco Offenders-NIDAAN ಪೋರ್ಟಲ್‌ನಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆ. ಆರೋಪಿಗಳ ದತ್ತಾಂಶ ವಿಶ್ಲೇಷಣೆ ಮಾಡಿ ಆರೋಪಿಗಳ |

| | | |
|---|---|---|
| | | ಚಲನವಲನಗಳ ಮೇಲೆ ನಿಗಾವಹಿಸಲಾಗಿದೆ.<br>➢ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ NCORD (Narcotics Co- ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರೆ ಇಲಾಖೆಯ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಭಾಗಿಯಾಗುವ ಆರೋಪಿಗಳನ್ನು ವಿದೇಶಿ ಪ್ರಜೆಗಳ ಕಾಯ್ದೆ ಅಡಿಯಲ್ಲಿ ಗಡಿಪಾರು ಪ್ರಕ್ರಿಯೆ ಕೈಗೊಳ್ಳಲು ಕ್ರಮ ಜರುಗಿಸಲಾಗುತ್ತಿದೆ. |
| (ಉ) | ರಾಜ್ಯದಲ್ಲಿ ಈ ವಿಷಯಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ಪೊಲೀಸ್ ಪಡೆಯನ್ನು ಆರಂಭಿಸಲಾಗಿದೆಯೇ? | ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/ 141/ ಪಿಒಪಿ/ 2025, ದಿನಾಂಕ: 02.08.2025 ರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotics Task Force) ಘಟಕವನ್ನು ಸೃಜಿಸಲಾಗಿದೆ. |

ಒಇ 53 ಪಿಎನ್‌ಡಿ 2025 (ಇ)

(ಡಾ: ಜಿ . ಪರಮೇಶ್ವರ)
ಗೃಹ ಸಚಿವರು